ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹದಿನಾಲ್ಕನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 29ನೇ ಡಿಸೆಂಬರ್, 2022

(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಕಾರ್ಯದರ್ಶಿಯವರು:-

ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುವುದು.

1. 2022ನೇ ಸಾಲಿನ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ (2022ರ ವಿಧಾನ ಪರಿಷತ್ತಿನ ವಿಧೇಯಕ ಸಂಖ್ಯೆ:01)
2. 2022ನೇ ಸಾಲಿನ ಕರ್ನಾಟಕ ಭೂ ಕಂದಾಯ (ಮೂರನೇ ತಿದ್ದುಪಡಿ) ವಿಧೇಯಕ (2022ರ ವಿಧಾನ ಪರಿಷತ್ತಿನ ವಿಧೇಯಕ ಸಂಖ್ಯೆ:02)

3. ವಿತ್ತೀಯ ಕಾರ್ಯಕಲಾಪಗಳು

2022-23ನೇ ಸಾಲಿನ ಪೂರಕ ಅಂದಾಜುಗಳ ಎರಡನೇ ಕಂತಿನ ಬೇಡಿಕೆಗಳ ಮೇಲೆ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

4. ಶಾಸನ ರಚನೆ

I. ವಿಧೇಯಕಗಳನ್ನು ಮಂಡಿಸುವುದು

1. ಡಾ. ಸಿ.ಎನ್. ಅಶ್ವಥ್ ನಾರಾಯಣ (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:-

ಅ) 2022ನೇ ಸಾಲಿನ ಜಿ.ಎಂ. ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. **ಡಾ. ಸಿ.ಎನ್. ಅಶ್ವಥ್ ನಾರಾಯಣ (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:–**
   ಅ) 2022ನೇ ಸಾಲಿನ ಕಿಷ್ಕಿಂದ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. **ಡಾ. ಸಿ.ಎನ್. ಅಶ್ವಥ್ ನಾರಾಯಣ (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:–**
   ಅ) 2022ನೇ ಸಾಲಿನ ಆಚಾರ್ಯ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

4. **ಡಾ. ಸಿ.ಎನ್. ಅಶ್ವಥ್ ನಾರಾಯಣ (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:–**
   ಅ) 2022ನೇ ಸಾಲಿನ ಸಪ್ತಗಿರಿ ಎನ್ ಪಿ ಎಸ್ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

5. **ಡಾ. ಸಿ.ಎನ್. ಅಶ್ವಥ್ ನಾರಾಯಣ (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:–**
   ಅ) 2022ನೇ ಸಾಲಿನ ರಾಜ್ಯ ಒಕ್ಕಲಿಗರ ಸಂಘ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

6. **ಡಾ. ಸಿ.ಎನ್. ಅಶ್ವಥ್ ನಾರಾಯಣ (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:–**
   ಅ) 2022ನೇ ಸಾಲಿನ ಟಿ. ಜಾನ್ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. **ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–**
   ಅ) ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2022ನೇ ಸಾಲಿನ ಕರ್ನಾಟಕ ಭೂ ಕಂದಾಯ (ಮೂರನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. **ಡಾ. ಕೆ. ಸುಧಾಕರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು) ಅವರು:–**
   ಅ) ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2022ನೇ ಸಾಲಿನ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. **ಡಾ. ಸಿ.ಎನ್. ಅಶ್ವಥ್ ನಾರಾಯಣ (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:–**

ಅ) 2022ನೇ ಸಾಲಿನ ಜಿ.ಎಂ. ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. **ಡಾ. ಸಿ.ಎನ್. ಅಶ್ವಥ್ ನಾರಾಯಣ (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:–**

ಅ) 2022ನೇ ಸಾಲಿನ ಕಿಷ್ಕಿಂದ ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. **ಡಾ. ಸಿ.ಎನ್. ಅಶ್ವಥ್ ನಾರಾಯಣ (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:–**

ಅ) 2022ನೇ ಸಾಲಿನ ಆಚಾರ್ಯ ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. **ಡಾ. ಸಿ.ಎನ್. ಅಶ್ವಥ್ ನಾರಾಯಣ (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:–**

ಅ) 2022ನೇ ಸಾಲಿನ ಸಪ್ತಗಿರಿ ಎನ್ ಪಿ ಎಸ್ ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

7. **ಡಾ. ಸಿ.ಎನ್. ಅಶ್ವಥ್ ನಾರಾಯಣ (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:–**

ಅ) 2022ನೇ ಸಾಲಿನ ರಾಜ್ಯ ಒಕ್ಕಲಿಗರ ಸಂಘ ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

8. **ಡಾ. ಸಿ.ಎನ್. ಅಶ್ವಥ್ ನಾರಾಯಣ (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:–**

ಅ) 2022ನೇ ಸಾಲಿನ ಟಿ. ಜಾನ್ ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ವಿಶೇಷ ಚರ್ಚೆ

1) ಉತ್ತರ ಕರ್ನಾಟಕ ಅಭಿವೃದ್ಧಿ ಕುರಿತು ಮುಂದುವರೆದ ಚರ್ಚೆ.
2) ರಾಜ್ಯದಲ್ಲಿ ಕಾಡುಪ್ರಾಣಿಗಳ ಹಾವಳಿ ಕುರಿತು ವಿಶೇಷ ಚರ್ಚೆ.
3) ರಾಜ್ಯದಲ್ಲಿ ಹೊಸ ಪಿಂಚಣಿ ಯೋಜನೆಯನ್ನು (ಎನ್‌ಪಿಎಸ್) ರದ್ದುಗೊಳಿಸಿ ಹಳೆಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಕುರಿತು ವಿಶೇಷ ಚರ್ಚೆ.

6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀ ಸಿದ್ದರಾಮಯ್ಯ ಹಾಗೂ ಇತರರು ಮತ್ತು ಶ್ರೀ ಹೆಚ್.ಡಿ. ರೇವಣ್ಣ ಹಾಗೂ ಇತರರು** – ರಾಜ್ಯಾದ್ಯಂತ ಅತಿವೃಷ್ಟಿ, ಅನಾವೃಷ್ಟಿ, ಹವಾಮಾನ ವೈಪರಿತ್ಯಗಳಿಂದಾಗಿ, ಕಳಪೆ ಬೀಜ, ಕಳಪೆ ಗೊಬ್ಬರ, ನಿಷೇಧಿತ ಕೀಟ ನಾಶಕಗಳ ಮಾರಾಟ, ಮಾರುಕಟ್ಟೆಯಲ್ಲಿ ಬೆಳೆಗಳ ದರ ಕುಸಿತದಿಂದ ತೀವ್ರ ಸಂಕಷ್ಟಕ್ಕೆ ಒಳಗಾಗಿರುವ ರೈತರುಗಳು ಅನುಭವಿಸುತ್ತಿರುವ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಸಿದ್ದರಾಮಯ್ಯ, ಆರ್.ವಿ. ದೇಶಪಾಂಡೆ, ಡಾ. ಜಿ. ಪರಮೇಶ್ವರ್, ಕೃಷ್ಣ ಬೈರೇಗೌಡ ಹಾಗೂ ಪ್ರಿಯಾಂಕ ಖರ್ಗೆ ಇವರುಗಳು** – ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಿವಿಧ ರೀತಿಯ ಕಾಮಗಾರಿಗಳು ಹಾಗೂ ವಿವಿಧ ಇಲಾಖೆಗಳಲ್ಲಿನ ನೇಮಕಾತಿ, ಬಡ್ತಿ, ವರ್ಗಾವಣೆ, ಖರೀದಿ, ಮಾರಾಟದಲ್ಲಿ ಭ್ರಷ್ಟಾಚಾರ ಮತ್ತು ಕಳಪೆ ಗೊಬ್ಬರ, ರಾಸಾಯನಿಕಗಳು, ಬಿತ್ತನೆ ಬೀಜಗಳ ಮಾರಾಟ ಇವುಗಳನ್ನು ನಿಯಂತ್ರಿಸುವಲ್ಲಿ ವಿಫಲವಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

ಹಾಗೂ

ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಬಂಡೆಪ್ಪ ಖಾಶೆಂಪೂರ, ಎ.ಟಿ. ರಾಮಸ್ವಾಮಿ, ಎಂ. ಕೃಷ್ಣಾರೆಡ್ಡಿ, ಕೆ.ಎಂ. ಶಿವಲಿಂಗೇಗೌಡ ಹಾಗೂ ಇತರರು – ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳು ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿರುವ ರೈತರುಗಳಿಗೆ ಒದಗಿಸುವ ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಕೇಂದ್ರ ಸರ್ಕಾರವು ನೀಡಿರುವ ಸಬ್ಸಿಡಿ ಸೌಲಭ್ಯವನ್ನು ಪಡೆಯುವಲ್ಲಿ ರಾಜ್ಯ ಸರ್ಕಾರವು ವಿಫಲವಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಹೆಚ್.ಕೆ. ಪಾಟೀಲ್, ಕೃಷ್ಣ ಬೈರೇಗೌಡ, ಎ.ಟಿ. ರಾಮಸ್ವಾಮಿ ಹಾಗೂ ಶ್ರೀಮತಿ ಸೌಮ್ಯ ರೆಡ್ಡಿ ಇವರುಗಳು** – ಬೆಂಗಳೂರಿನಲ್ಲಿರುವ ಟರ್ಫ್ ಮತ್ತು ಗಾಲ್ಫ್ ಕ್ಲಬ್‌ಗಳು ಬಾಕಿ ಇರುವ ಕೋಟ್ಯಾಂತರ ರೂಪಾಯಿಗಳ ಬಾಡಿಗೆಯನ್ನು ಪಾವತಿಸದೇ ರಾಜ್ಯದ ಬೊಕ್ಕಸಕ್ಕೆ ಮಾಡಿರುವ ನಷ್ಟದ ಬಗ್ಗೆ ಹಾಗೂ ಗುತ್ತಿಗೆ ಅವಧಿ ಮುಗಿದಿರುವ ಸದರಿ ಖಾಸಗಿ ಕ್ಲಬ್‌ಗಳನ್ನು ಬೆಂಗಳೂರಿನ ಹೊರಭಾಗಕ್ಕೆ ಸ್ಥಳಾಂತರಿಸಿ, ಸದರಿ ಪ್ರದೇಶಗಳಲ್ಲಿ ಉದ್ಯಾನವನ, ಆಟದ ಮೈದಾನಗಳನ್ನು ನಿರ್ಮಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4) **ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಎ.ಟಿ. ರಾಮಸ್ವಾಮಿ, ಕೆ.ಎಂ. ಶಿವಲಿಂಗೇಗೌಡ, ರವೀಂದ್ರ ಶ್ರೀಕಂಠಯ್ಯ, ಸುರೇಶ್ ಗೌಡ ಹಾಗೂ ಇತರರು** – ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಪರವಾನಿಗೆ ಪಡೆದ ಹಾಗೂ ಪರವಾನಿಗೆ ಪಡೆಯದೆ ಅಕ್ರಮವಾಗಿ ಕಲ್ಲು ಗಣಿಗಾರಿಕೆ ನಡೆಸುತ್ತಿರುವ ಉದ್ಯಮಿಗಳು ರಾಯಲ್ಟಿ ಶುಲ್ಕ ಮತ್ತು ಜಿ.ಎಸ್.ಟಿ. ಶುಲ್ಕ ಪಾವತಿಸದೆ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿಗಳ ನಷ್ಟ ಉಂಟು ಮಾಡುತ್ತಿರುವ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

5) **ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಎ.ಟಿ. ರಾಮಸ್ವಾಮಿ, ಕೆ.ಎಂ. ಶಿವಲಿಂಗೇಗೌಡ, ಎಂ.ವಿ. ವೀರಭದ್ರಯ್ಯ, ರವೀಂದ್ರ ಶ್ರೀಕಂಠಯ್ಯ ಹಾಗೂ ಇತರರು** – ಹಾಸನ ತಾಲ್ಲೂಕು ಕಸಬಾ ಹೋಬಳಿಯ ವಿವಿಧ ಗ್ರಾಮಗಳಲ್ಲಿನ ಕೆಲವು ಜಮೀನುಗಳಿಗೆ ಸರಿಯಾದ ದಾಖಲಾತಿಗಳು ಇಲ್ಲದಿದ್ದರೂ ಸರ್ವೆ ಮಾಡಿಸದೇ, ಜಮೀನುಗಳ ದುರಸ್ತಿ ಮಾಡಿಸದೇ ಅನ್ಯಸಂಕ್ರಮಣ ಮಾಡಿಸದೇ ಟೌನ್ ಪ್ಲಾನಿಂಗ್ ಅನುಮೋದನೆ ಹಾಗೂ ಸಂಬಂಧಪಟ್ಟ ಇಲಾಖೆಗಳಿಂದ ನಿರಾಕ್ಷೇಪಣಾ ಪತ್ರಗಳನ್ನು ಪಡೆಯದೇ ಭೂಮಾಫಿಯಾದವರು ಕಾನೂನುಬಾಹಿರವಾಗಿ ಬಡಾವಣೆಗಳನ್ನು ರಚಿಸಿ ನಿವೇಶನಗಳನ್ನು ಮಾರಾಟ ಮಾಡಿ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿಗಳ ನಷ್ಟ ಉಂಟು ಮಾಡಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

6) **ಶ್ರೀ ಎಸ್. ಆರ್. ವಿಶ್ವನಾಥ್, ಶ್ರೀ ಕೆ.ಜಿ. ಬೋಪಯ್ಯ ಹಾಗೂ ಇತರರು ಮತ್ತು ಶ್ರೀ ಕೆ.ವೈ. ನಂಜೇಗೌಡ, ಶ್ರೀ ಕೃಷ್ಣ ಬೈರೇಗೌಡ ಹಾಗೂ ಇತರರು** – ರಾಜ್ಯದಲ್ಲಿ ಒಕ್ಕಲಿಗ ಸಮುದಾಯಕ್ಕೆ ಶೈಕ್ಷಣಿಕ, ಔದ್ಯೋಗಿಕ, ರಾಜಕೀಯ ಕ್ಷೇತ್ರಗಳಲ್ಲಿ ಪ್ರಸ್ತುತ ಇರುವ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸುವ ಬಗ್ಗೆ ಮತ್ತು ಕುಂಚಿಟಿಗ ಹಾಗೂ ಇತರೆ ಉಪ ಜಾತಿಗಳನ್ನು ಓ.ಬಿ.ಸಿ. ಪಟ್ಟಿಯಲ್ಲಿ ಸೇರ್ಪಡೆಗೊಳಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

7. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಡಿ.ಕೆ. ಶಿವಕುಮಾರ್ ಅವರು** – ಹೊಸ ಟಿ.ಡಿ.ಆರ್. ಪಾಲಿಸಿಯ ಪ್ರಕಾರ ಮಾರುಕಟ್ಟೆ ದರದ ಬೆಲೆಗಿಂತ ಶೇ. 50ರಷ್ಟು ಕಡಿಮೆ ರಿಯಾಯಿತಿ ನೀಡಿ ಟಿ.ಡಿ.ಆರ್. ಮಾರುತ್ತಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಕೋಟಿ ರೂಪಾಯಿಗಳು ನಷ್ಟವಾಗುತ್ತಿರುವ ಬಗ್ಗೆ ಹಾಗೂ ಹಿಂದಿನ ಮತ್ತು ಪ್ರಸ್ತುತ ಟಿ.ಡಿ.ಆರ್.ಗೂ ವ್ಯತ್ಯಾಸವಿರುವುದರಿಂದ ಜಮೀನು ಕಳೆದುಕೊಂಡವವರಿಗೆ ಅನ್ಯಾಯವಾಗುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

2) **ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ ಅವರು** – ನಿವೇಶನ ರಹಿತರಿಗೆ ನಿವೇಶನ ನೀಡುವಾಗ ಅನುಮೋದಿತ ವಸತಿ ಬಡಾವಣೆ ಯೋಜನೆಯಲ್ಲಿರುವಂತೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿ, ವಸತಿ ನಿವೇಶನವನ್ನು ನಿರ್ಮಾಣ ಮಾಡಿ ಕನಿಷ್ಟ 10 ಸೆಂಟ್ಸ್ ನಿವೇಶನಗಳನ್ನು ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3) **ಶ್ರೀ ಸಿದ್ದು ಸವದಿ ಅವರು** – 2019-2020ರಲ್ಲಿ ರೈತರ ಸಾಲಮನ್ನಾದಿಂದ ವಂಚಿತರಾದ ರೈತರಿಗೂ ಸಹ ಸಾಲಮನ್ನಾದ ಹಣ ಬಿಡುಗಡೆಗೊಳಿಸುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

4) **ಶ್ರೀ ಪಿ. ರಾಜೀವ್ ಅವರು** – ಕುಡಚಿ ಮತಕ್ಷೇತ್ರದ ವ್ಯಾಪ್ತಿಯಲ್ಲಿರುವ ಶಿರಗೂರು ಮತ್ತು ಗುಂಡವಾಡ ಗ್ರಾಮಗಳು ಕೃಷ್ಣಾ ನದಿ ಪ್ರವಾಹದಿಂದ ಸಂಪೂರ್ಣವಾಗಿ ಮುಳುಗಡೆಯಾಗಿ ಗ್ರಾಮಸ್ಥರು ತೊಂದರೆಗಳನ್ನು ಅನುಭವಿಸುತ್ತಿರುವುದರಿಂದ ಸದರಿ ಗ್ರಾಮಗಳನ್ನು ಮುಳುಗಡೆ ಗ್ರಾಮಗಳೆಂದು ಘೋಷಿಸಿ, ಶಾಶ್ವತವಾಗಿ ಸ್ಥಳಾಂತರಿಸಿ ಪರಿಹಾರ ಮತ್ತು ಪುನರ್ ವಸತಿ ಕಲ್ಪಿಸುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

5) **ಶ್ರೀ ಬಂಡೆಪ್ಪ ಖಾಶೆಂಪೂರ ಅವರು** – ಕಲಬುರಗಿ ಜಿಲ್ಲೆ ಸೇಡಂ ತಾಲ್ಲೂಕಿನಲ್ಲಿ ಶ್ರೀ ಸಿಮೆಂಟ್ ಕಂಪನಿಯವರು ರಸ್ತೆ ನಿರ್ಮಾಣ ಮಾಡಲು ಜಮೀನು ಖರೀದಿಸಿ ಪ್ರತಿ ಎಕರೆ ಜಮೀನಿಗೆ ಪಾವತಿಸಿದ ದರವನ್ನೇ ಕಂಪನಿಯನ್ನು ಸ್ಥಾಪಿಸುವ ಸಮಯದಲ್ಲಿ ಜಮೀನು ಖರೀದಿಸಿದ ವಿವಿಧ ಗ್ರಾಮದ ರೈತರುಗಳಿಗೂ ಸಹ ಭೂಸ್ವಾಧೀನ ಕಾಯ್ದೆಯಂತೆ ಪಾವತಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

6) **ಶ್ರೀ ಕೆ. ಮಹದೇವ ಅವರು** – ರಾಜ್ಯದಲ್ಲಿ ರಾಗಿ ಖರೀದಿಯ ನಿಗದಿತ ಗುರಿ ಮುಟ್ಟಲು ಹಾಗೂ ರೈತರಿಗೆ ಅನುಕೂಲ ಮಾಡುವ ದೃಷ್ಟಿಯಿಂದ ಒಂದು ಎಕರೆಯಿಂದ ಏಳು ಎಕರೆ ಜಮೀನಿರುವ ರೈತರಿಂದ ರಾಗಿ ಖರೀದಿ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

7) **ಶ್ರೀ ಕೆ.ಬಿ. ಅಶೋಕ್ ನಾಯ್ಕ್ ಅವರು** – ಶಿವಮೊಗ್ಗ ಗ್ರಾಮಾಂತರ ವಿಧಾನಸಭಾ ಕ್ಷೇತ್ರದಲ್ಲಿ ಕಂದಾಯ ಗ್ರಾಮಗಳ ರಚನೆ ಮತ್ತು ಹಕ್ಕುಪತ್ರಗಳ ವಿತರಣೆಯಲ್ಲಿ ಆಗಿರುವ ಪ್ರಗತಿಯ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8) **ಶ್ರೀ ಕಳಕಪ್ಪ ಬಂಡಿ ಅವರು** – ಗದಗ ನಗರದಲ್ಲಿ ಬಾಲಕಿಯರಿಗಾಗಿ ಶ್ರೀ ಕಾಳಿದಾಸ ಶಿಕ್ಷಣ ಸಮಿತಿ ವತಿಯಿಂದ ನಡೆಸುತ್ತಿರುವ ಬಾಲಕಿಯರ ಖಾಸಗಿ ಮೆಟ್ರಿಕ್ ನಂತರದ/ವೃತ್ತಿಪರ ವಸತಿ ನಿಲಯಕ್ಕೆ ಇಲಾಖಾ ಮಾನ್ಯತೆ ನೀಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

9) **ಶ್ರೀ ಸೋಮನಗೌಡ ಬಿ. ಪಾಟೀಲ್ ಅವರು** – ದೇವರಹಿಪ್ಪರಗಿ ವಿಧಾನಸಭಾ ಕ್ಷೇತ್ರದಲ್ಲಿರುವ ಬಸವನ ಬಾಗೇವಾಡಿ ತಾಲ್ಲೂಕಿನ ಹೂವಿನ ಹಿಪ್ಪರಗಿ ಗ್ರಾಮದ ಲೋಕೋಪಯೋಗಿ ಇಲಾಖೆಗೆ ಸೇರಿದ ಜಮೀನಿನಲ್ಲಿ ಮನೆಗಳನ್ನು ನಿರ್ಮಾಣ ಮಾಡಿಕೊಂಡು ವಾಸಿಸುತ್ತಿರುವ ಕುಟುಂಬಗಳಿಗೆ ಹಕ್ಕು ಪತ್ರಗಳನ್ನು ನೀಡಲು ಸದರಿ ಜಮೀನನ್ನು ಕಂದಾಯ ಇಲಾಖೆಯ ವಶಕ್ಕೆ ನೀಡುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

10) **ಡಾ: ಯತೀಂದ್ರ ಸಿದ್ದರಾಮಯ್ಯ ಅವರು** – ವರುಣ ವಿಧಾನಸಭಾ ಕ್ಷೇತ್ರದ ನಂಜನಗೂಡು ತಾಲ್ಲೂಕಿನ ವಿವಿಧ ಗ್ರಾಮಗಳ ಕೃಷಿ ಭೂಮಿಯನ್ನು ಕೆ.ಐ.ಎ.ಡಿ.ಬಿ.ಯಿಂದ ವಶಪಡಿಸಿಕೊಳ್ಳಲು ರೈತರು ಆತಂಕಕ್ಕೊಳಗಾಗಿರುವುದರಿಂದ ಸದರಿ ಕೃಷಿ ಭೂಮಿಯನ್ನು ಭೂಸ್ವಾಧೀನದಿಂದ ಕೈಬಿಟ್ಟು ರೈತರಿಗೆ ಅನುಕೂಲ ಮಾಡಿಕೊಡುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

11) **ಡಾ. ಅಜಯ್ ಧರ್ಮಸಿಂಗ್ ಅವರು** – ಜೇವರ್ಗಿ ವಿಧಾನಸಭಾ ಕ್ಷೇತ್ರದ ಜೇವರ್ಗಿ ಪಟ್ಟಣದಲ್ಲಿ ಅಪೂರ್ಣಗೊಂಡಿರುವ ಅಲ್ಪಸಂಖ್ಯಾತರ ಸಮುದಾಯ ಭವನ ಕಟ್ಟಡ ಕಾಮಗಾರಿಯನ್ನು ಪೂರ್ಣಗೊಳಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

8. ಶಾಸನ ರಚನೆ

ವಿಧೇಯಕವನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

ಶ್ರೀ ವಿ. ಸುನಿಲ್ ಕುಮಾರ್ (ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:–

ಅ) 2022ನೇ ಸಾಲಿನ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

9. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಸಿದ್ದು ಸವದಿ ಅವರು – ಬಸ್ಸುಗಳ ಸೌಲಭ್ಯ ಕುರಿತಂತೆ ದಿನಾಂಕ: 21.12.2022ರಂದು ಮೂರನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 34(639)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm